ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಒಂಭತ್ತನೇ ಅಧಿವೇಶನ

(ಮುಂದುವರೆದ ಉಪವೇಶನ)

ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 10ನೇ ಮಾರ್ಚ್, 2021

(ಸಮಯ: ಬೆಳಿಗ್ಗೆ 10.30 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಎಂಟನೇ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಎಂಟನೇ ಪಟ್ಟಿ

2. ವಿತ್ತೀಯ ಕಾರ್ಯಕಲಾಪಗಳು

2021–22ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಸಾಮಾನ್ಯ ಚರ್ಚೆ.

3. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಸಿದ್ದರಾಮಯ್ಯ, ಕೆ.ಆರ್. ರಮೇಶ್ ಕುಮಾರ್, ಕೃಷ್ಣಬೈರೇಗೌಡ, ಡಾ. ಅಜಯ್ ಧರ್ಮಸಿಂಗ್, ಹೆಚ್.ಪಿ. ಮಂಜುನಾಥ್ ಹಾಗೂ ಇತರರು** – ರಾಜ್ಯದಲ್ಲಿ ಪೆಟ್ರೋಲ್, ಡೀಸಲ್, ಅಡುಗೆ ಅನಿಲ ಮತ್ತು ಜೀವನಾವಶ್ಯಕ ವಸ್ತುಗಳ ಬೆಲೆ ಏರಿಕೆಯನ್ನು ತಡೆಗಟ್ಟುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

2) **ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಹೆಚ್.ಡಿ. ರೇವಣ್ಣ, ಬಂಡೆಪ್ಪ ಖಾಶೆಂಪೂರ್, ಕೆ.ಎಂ. ಶಿವಲಿಂಗೇಗೌಡ, ಆರ್. ಮಂಜುನಾಥ್ ಹಾಗೂ ಇತರರು** – ಮಾಯನೂರು ಜಲಾಶಯವನ್ನು ಗುಂಡಾರು, ದಕ್ಷಿಣ ವೆಲ್ಲೂರು ಮತ್ತು ವೈಗಾಯಿ ನದಿಗಳೊಂದಿಗೆ ಜೋಡಣೆ ಮಾಡುವ ನಿರ್ಮಾಣ ಕಾರ್ಯದಿಂದಾಗಿ ಉಂಟಾಗಿರುವ ಸಮಸ್ಯೆಗಳ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

..2/

4. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಅಭಯ ಪಾಟೀಲ ಅವರು** – ಬೆಳಗಾವಿ ದಕ್ಷಿಣ ಮತಕ್ಷೇತ್ರದ ವಿವಿಧ ಕೈಗಾರಿಕಾ ಪ್ರದೇಶಗಳಿಂದ ರಾಷ್ಟ್ರೀಯ ಹೆದ್ದಾರಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳ ಅಭಿವೃದ್ಧಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಯವರ (ಲೋಕೋಪಯೋಗಿ) ಗಮನ ಸೆಳೆಯುವುದು.

2) **ಶ್ರೀ ಸುಭಾಷ್ ಆರ್. ಗುತ್ತೇದಾರ್ ಅವರು** – ಗ್ರಾಮೀಣ ಪ್ರದೇಶಗಳ ಜಮೀನುಗಳಲ್ಲಿ ರೈತರು ನಿರ್ಮಿಸಿಕೊಂಡಿರುವ ಮನೆಗಳಿಗೆ ವಿದ್ಯುತ್ ಸಂಪರ್ಕ ಒದಗಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

3) **ಶ್ರೀ ಈ. ತುಕಾರಾಮ್ ಅವರು** – ರಾಜ್ಯದಲ್ಲಿನ ಹಲವಾರು ಗ್ರಾಮಗಳಲ್ಲಿ ಇನಾಂಗಳ ರದ್ದತಿ ಕಾಯ್ದೆಯಡಿಯಲ್ಲಿ ಅರ್ಜಿಗಳನ್ನು ಸಲ್ಲಿಸಲು ಅವಧಿಯನ್ನು ವಿಸ್ತರಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

4) **ಶ್ರೀ ಎಂ.ಪಿ. ಕುಮಾರಸ್ವಾಮಿ ಅವರು** – ಚಿಕ್ಕಮಗಳೂರು ಜಿಲ್ಲಾ ವ್ಯಾಪ್ತಿಯ ಮೂಡಿಗೆರೆ ಸೇರಿದಂತೆ ಹಲವಾರು ಭಾಗಗಳಲ್ಲಿ ಅತಿವೃಷ್ಟಿಯಿಂದಾಗಿ ಕಾಫಿ ಬೆಳೆಗಾರರು ಸ್ಪ್ರಿಂಕ್ಲರ್ ಮಾಡಲು ಅನುಕೂಲವಾಗುವಂತೆ ವಿದ್ಯುತ್ ಸರಬರಾಜು ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

5) **ಶ್ರೀ ಪಿ. ರಾಜೀವ್ ಅವರು** – ಕರ್ನಾಟಕ ಪೊಲೀಸ್ ಕಾನ್‌ಸ್ಟೇಬಲ್ ಹುದ್ದೆಯ ನೇಮಕಾತಿ ವಯೋಮಿತಿಯಲ್ಲಿ ಎರಡು ವರ್ಷಗಳಷ್ಟು ಹೆಚ್ಚಿಸುವ ಬಗ್ಗೆ ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರ ಗಮನ ಸೆಳೆಯುವುದು.

6) **ಶ್ರೀ ಪ್ರಿಯಾಂಕ್ ಖರ್ಗೆ ಅವರು** – ಕೊರೋನಾ ವಾರಿಯರ್ಸ್‌ಗಳಾಗಿ ಕರ್ತವ್ಯ ನಿರ್ವಹಿಸಿರುವ ಖಾಸಗಿ ಆಸ್ಪತ್ರೆಯ ಸಿಬ್ಬಂದಿಗಳಿಗೆ ಎರಡನೇ ಹಂತದ ಲಸಿಕೆ ನೀಡಲು ಶುಲ್ಕ ನಿಗದಿಪಡಿಸಿರುವ ಬಗ್ಗೆ ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

7) **ಶ್ರೀ ಎನ್.ಹೆಚ್. ಶಿವಶಂಕರ ರೆಡ್ಡಿ ಅವರು** – ಗೌರಿಬಿದನೂರು ತಾಲ್ಲೂಕು ಆಸ್ಪತ್ರೆ ಕಟ್ಟಡ ಕಾಮಗಾರಿಯನ್ನು ರದ್ದುಪಡಿಸಿರುವ ಬಗ್ಗೆ ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

8) **ಶ್ರೀ ಎ.ಟಿ. ರಾಮಸ್ವಾಮಿ ಅವರು** – ಸರ್ಕಾರಿ ಶಾಲೆಗಳಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ ಮತ್ತು ಗುಣಮಟ್ಟದ ಶಿಕ್ಷಣ ದೊರಕದೇ ಬಡ ಕುಟುಂಬದ ವಿದ್ಯಾರ್ಥಿಗಳಿಗೆ ಅನ್ಯಾಯವಾಗುತ್ತಿರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

9) **ಶ್ರೀಮತಿ ಸೌಮ್ಯ ರೆಡ್ಡಿ ಅವರು** – ಅಂಗನವಾಡಿ ಕೇಂದ್ರಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರ ಗಮನ ಸೆಳೆಯುವುದು.

10) **ಶ್ರೀ ಸಿ.ಎನ್. ಬಾಲಕೃಷ್ಣ ಅವರು** – ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರದ ಚನ್ನರಾಯಪಟ್ಟಣದ ವಿವಿಧ ಗ್ರಾಮಗಳಿಗೆ ನಿರಂತರ ಜ್ಯೋತಿ ಸಂಪರ್ಕವನ್ನು ಒದಗಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

11) **ಶ್ರೀ ಹೆಚ್.ಡಿ. ರೇವಣ್ಣ ಅವರು** – ಹಾಸನ ಜಿಲ್ಲೆ ಹರದನಹಳ್ಳಿ ಗ್ರಾಮದಲ್ಲಿ ಸಮುದಾಯ ಭವನ ಕಟ್ಟಡ ನಿರ್ಮಾಣ ಕಾಮಗಾರಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

ಎಂ.ಕೆ.ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ಅಂತರ್ಜಾಲದ ಈ ವಿಳಾಸದಲ್ಲಿ ಪಡೆದುಕೊಳ್ಳಬಹುದು
http://kla.kar.nic.in/assembly/lob/lob.htm